VK ವಿಜಯ ಕರ್ನಾಟಕ
e-paper

# ವಿಟಿಯು ಜತೆ ವಿಡಿಐಟಿ ಒಪ್ಪಂದ



ವಿಡಿಐಟಿ ಮತ್ತು ದಾಂಡೇಲಿಯ ಸ್ಕಿಲ್ ಸೆಂಟರ ನಡುವೆ ತಾಂತ್ರಿಕ ಒಡಂಬಡಿಕೆ ನಡೆಯಿತು.

■ **ವಿಕ ಸುದ್ದಿಲೋಕ** ಹಳಿಯಾಳ

ಪಟ್ಟಣದಲ್ಲಿರುವ ಕೆಎಲ್ಎಸ್ ವಿಡಿಐಟಿ ಎಂಜಿನಿಯರಿಂಗ್ ಕಾಲೇಜ್, ದಾಂಡೇಲಿಯಲ್ಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕೌಶಲ್ಯಾಭಿವೃದ್ಧಿ ಕೇಂದ್ರದ ಜೊತೆಗೆ ಸೋಮವಾರ ತಾಂತ್ರಿಕ ಒಡಂಬಡಿಕೆ ಮಾಡಿಕೊಂಡಿತು.

ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ನಡೆದ ಸಲಹಾ ಸಮಿತಿಯ ಸಭೆಯಲ್ಲಿ ಶಾಸಕ ಆರ್.ವಿ.ದೇಶಪಾಂಡೆ ಅವರ ಸಮ್ಮುಖದಲ್ಲಿ ವಿಡಿಐಟಿ ಪ್ರಾಚಾರ್ಯ ಡಾ.ವಾದಿರಾಜ ಕುಲಕರ್ಣಿ ಮತ್ತು ವಿಟಿಯು ಕುಲಪತಿ ವಿದ್ಯಾಶಂಕರ ಅವರು ಒಡಂಬಡಿಕೆಯ ದಾಖಲೆಗಳನ್ನು ವಿನಿಮಯ ಮಾಡಿಕೊಂಡರು. ಶಾಸಕ ದೇಶಪಾಂಡೆ ಮಾತನಾಡಿ, ''ಇಂದಿನ ಆಧುನಿಕ ಹಾಗೂ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣದ ಜೊತೆಗೆ ಕೌಶಲ ಅಗತ್ಯವಾಗಿದೆ. ಕೌಶಲದಿಂದ ಮಾತ್ರ ವಿನೂತನ ಮಾದರಿಯ ಯೋಜನೆ ರೂಪಿಸಲು ಸಾಧ್ಯ.'' ಎಂದರು.

ವಿಟಿಯು ಕುಲಪತಿ ಡಾ.ವಿದ್ಯಾಶಂಕರ ಮಾತನಾಡಿ, ''ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನದ ಉನ್ನತೀಕರಣಕ್ಕಾಗಿ ದಾಂಡೇಲಿಯ ಕೌಶಲಾಭಿವೃದ್ಧಿ ಕೇಂದ್ರದಲ್ಲಿ ಹಲವು ಹೊಸ ಮಾದರಿಯ ತರಬೇತಿಗಳನ್ನು ಆರಂಭಿಸಲಾಗಿದೆ.''ಎಂದರು. ವಿಡಿಐಟಿ ಪ್ರಾಚಾರ್ಯ ಡಾ. ವಾದಿರಾಜ್ ಮಾತನಾಡಿ, ಮಹಾವಿದ್ಯಾಲಯದ ವಿದ್ಯಾರ್ಥಿಗಳನ್ನು ಸಿಎನ್‌ಸಿ ಮಶೀನ್ ಆಪರೇಶನ್ ಮತ್ತು ಕಂಪ್ಯೂಟರ್ ಹಾರ್ಡವೇರ್ ಮತ್ತು ನೆಟ್‌ವರ್ಕಿಂಗ್ ವಿಷಯಗಳ ಹೆಚ್ಚಿನ ತರಬೇತಿಗಾಗಿ ಕೌಶಲಾಭಿವೃದ್ಧಿ ಕೇಂದ್ರಕ್ಕೆ ಕಳಿಸಲಾಗುವುದು.''ಎಂದರು.

ಈ ಸಂದರ್ಭದಲ್ಲಿ ಕೌಶಲಾಭಿವೃದ್ಧಿ ಕೇಂದ್ರದ ಸಲಹಾ ಸಮಿತಿ ಸದಸ್ಯರಾದ ನಾರಾಯಣ ಕೊಸೂರ, ಚೈತನ್ಯ ಕುಲಕರ್ಣಿ, ಸೋನಿಯಾ ನೇತಲ್ಕರ, ಕಾಗದ ಕಾರಖಾನೆಯ ಗಿರಿರಾಜ್, ಪ್ರದೀಪ ಚಿಕ್ಕಮಠ, ಯೋಜನೆಯ ನಿರ್ದೇಶಕರಾದ ಡಾ.ಸಂಧ್ಯಾ ಅಣ್ವೇಕರ, ಪ್ರೊ.ವಿಜೇತ ಸ್ವಾಧಿ ಇದ್ದರು.

# ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದೊಂದಿಗೆ ವಿಡಿಐಟಿ ಒಡಂಬಡಿಕೆ



**ಶಿರಸಿ ಸಮಾಚಾರ ⏭ ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳವು ವಿ.ಟಿ.ಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರ ದಾಂಡೇಲಿಯ ಜೊತೆ ಅಕ್ಟೋಬರ್ 16ರಂದು ಒಡಂಬಡಿಕೆ ಮಾಡಿಕೊಂಡಿತು. ಈ ಒಡಂಬಡಿಕೆಯ ಮುಖಾಂತರ ವಿದ್ಯಾರ್ಥಿಗಳು ಇಂಟರ್ನ್‌ಶಿಪ್ ಮತ್ತು ಕೈಗಾರಿಕಾ ಅನುಭವಗಳನ್ನು ಅತೀ ಕಡಿಮೆ ವೆಚ್ಚದಲ್ಲಿ ಪಡೆದುಕೊಳ್ಳಬಹುದಾಗಿದೆ. ವಿಟಿಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ ಸಲಹಾ ಸಮಿತಿ ಸಭೆಯಲ್ಲಿ ಈ ಒಡಂಬಡಿಕೆಗೆ ಸಹಿ ಹಾಕಲಾಯಿತು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಶಾಸಕ ಆರ್.ವಿ.ದೇಶಪಾಂಡೆ ಅವರು ದಾಂಡೇಲಿಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಒದಗಿಸಲಾದ ಅತ್ಯಾಧುನಿಕ ಸೌಲಭ್ಯಗಳನ್ನು ಸದುಪಯೋಗ ಗೊಳಿಸಿಕೊಳ್ಳಲು ಕರೆ ನೀಡಿದರು.

ವಿಟಿಯು ಬೆಳಗಾವಿಯ ಕುಲಪತಿಗಳಾದ ಡಾ. ವಿದ್ಯಾಶಂಕರ್ ಎಸ್ ಅವರು ಮಾತನಾಡಿ ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ ಉನ್ನತೀಕರಣಕ್ಕಾಗಿ ಹೆಚ್ಚಿನ ತರಬೇತಿಗಳನ್ನು ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ಕೆಎಲ್ಎಸ್ ವಿಡಿಐಟಿ ಪ್ರಾಂಶುಪಾಲ ಡಾ.ವಿ.ಎ.ಕುಲಕರ್ಣಿ ಅವರು ಮಾತನಾಡುತ್ತ ಮಹಾವಿದ್ಯಾಲಯದ ವಿದ್ಯಾರ್ಥಿಗಳನ್ನು ಸಿ.ಎನ್.ಸಿ ಮಶಿನ್ ಆಪರೇಶನ್ಸ್ ಮತ್ತು ಕಂಪ್ಯೂಟರ್ ಹಾರ್ಡ್‌ವೇರ್ ಎಂಡ್ ನೆಟ್ವರ್ಕಿಂಗ್ ವಿಷಯಗಳಲ್ಲಿ ಹೆಚ್ಚಿನ ತರಬೇತಿಗಾಗಿ ಕೌಶಲ್ಯಾಭಿವೃದ್ಧಿ ಕೇಂದ್ರಕ್ಕೆ ಕಳಿಸಲಾಗುವುದು ಎಂದು ತಿಳಿಸಿದರು.

ಕೌಶಲ್ಯಾಭಿವೃದ್ಧಿ ಕೇಂದ್ರದ ಸಲಹಾ ಸಮಿತಿ ಸದಸ್ಯರುಗಳಾದ ಶ್ರೀ. ನಾರಾಯಣ ಥೋಸುರ್, ಚೈತನ್ಯ ಕುಲಕರ್ಣಿ, ಕು. ಸೋನಿಯಾ ನೇತಲ್ಕರ್, ವೆಸ್ಟ್ ಕೋಸ್ಟ್ ಪೇಪರ್ ಮಿಲ್ಸ್‌ನ . ಕೆ.ಜೆ ಗಿರಿರಾಜ್, ಬೆಳಗಾವಿಯ ಸರ್ವೋ ಕಂಟ್ರೋಲ್ ಲಿ.ನ ಪ್ರದೀಪ ಚಿಕ್ಕಮಠ್, ವಿ.ಟಿ.ಯು ಕೌಶಲ್ಯಾಭಿವೃದ್ಧಿ ಯೋಜನೆಯ ನಿರ್ದೇಶಕರಾದ ಡಾ. ಸಂಧ್ಯಾ ಅಣ್ವೇಕರ್, ದಾಂಡೇಲಿಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದ ನಿರ್ದೇಶಕರಾದ ಪ್ರೊ. ವಿಜೇತ ಸ್ವಾದಿ ಉಪಸ್ಥಿತರಿದ್ದರು. ವಿ.ಟಿ.ಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರ ದಾಂಡೇಲಿಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವ ಪ್ರಥಮ ಮಹಾವಿದ್ಯಾಲಯ ವಿಡಿಐಟಿ ಆಗಿದೆ.

# ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದೊಂದಿಗೆ ವಿಡಿಐಟಿ ಒಡಂಬಡಿಕೆ

ನುಡಿಜೇನು ವರದಿ



**ಹಳಿಯಾಳ:** ಕೆಎಲ್ಎಸ್ ವಿಡಿಐಟಿಯು ದಾಂಡೇಲಿಯ ವಿಟಿಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದ ಜೊತೆ ಒಡಂಬಡಿಕೆ ಮಾಡಿಕೊಂಡಿತು. ಈ ಒಡಂಬಡಿಕೆಯ ಮುಖಾಂತರ ವಿದ್ಯಾರ್ಥಿಗಳು ಇಂಟರ್ನ್‌ಶಿಪ್ ಮತ್ತು ಕೈಗಾರಿಕಾ ಅನುಭವಗಳನ್ನು ಅತೀ ಕಡಿಮೆ ವೆಚ್ಚದಲ್ಲಿ ಪಡೆದುಕೊಳ್ಳಬಹುದಾಗಿದೆ. ವಿ.ಟಿ.ಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ ಸಲಹಾ ಸಮಿತಿ ಸಭೆಯಲ್ಲಿ ಈ ಒಡಂಬಡಿಕೆಗೆ ಸಹಿ ಹಾಕಲಾಯಿತು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಶಾಸಕ ಆರ್.ವಿ.ದೇಶಪಾಂಡೆ ಅವರು ದಾಂಡೇಲಿಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಒದಗಿಸಲಾದ ಅತ್ಯಾಧುನಿಕ ಸೌಲಭ್ಯಗಳನ್ನು ಸದುಪಯೋಗಗೊಳಿಸಿಕೊಳ್ಳಲು ಕರೆ ನೀಡಿದರು. ವಿಟಿಯು ಬೆಳಗಾವಿಯ ಕುಲಪತಿಗಳಾದ ಡಾ.ವಿದ್ಯಾಶಂಕರ್ ಎಸ್. ಮಾತನಾಡಿ, ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ ಉನ್ನತೀಕರಣಕ್ಕಾಗಿ ಹೆಚ್ಚಿನ ತರಬೇತಿಗಳನ್ನು ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು. ಕೆಎಲ್ಎಸ್ ವಿಡಿಐಟಿ ಪ್ರಾಂಶುಪಾಲ ಡಾ.ವಿ.ಎ.ಕುಲಕರ್ಣಿ ಮಾತನಾಡುತ್ತ, ಮಹಾವಿದ್ಯಾಲಯದ ವಿದ್ಯಾರ್ಥಿಗಳನ್ನು ಸಿಎನ್‌ಸಿ ಮಶಿನ್ ಆಪರೇಶನ್ಸ್ ಮತ್ತು ಕಂಪ್ಯೂಟರ್ ಹಾರ್ಡ್ವೇರ್ ಎಂಡ್ ನೆಟ್ವರ್ಕಿಂಗ್ ವಿಷಯಗಳಲ್ಲಿ ಹೆಚ್ಚಿನ ತರಬೇತಿಗಾಗಿ ಕೌಶಲ್ಯಾಭಿವೃದ್ಧಿ ಕೇಂದ್ರಕ್ಕೆ ಕಳಿಸಲಾಗುವುದು ಎಂದು ತಿಳಿಸಿದರು.

ಕೌಶಲ್ಯಾಭಿವೃದ್ಧಿ ಕೇಂದ್ರದ ಸಲಹಾ ಸಮಿತಿ ಸದಸ್ಯರುಗಳಾದ ನಾರಾಯಣ ತೋಸುರ್, ಚೈತನ್ಯ ಕುಲಕರ್ಣಿ, ಸೋನಿಯಾ ನೇತಲ್ಕರ್, ವೆಸ್ಟ್‌ಕೋಸ್ಟ್ ಪೇಪರ್ ಮಿಲ್ಸ್‌ನ ಕೆ.ಜೆ.ಗಿರಿರಾಜ್, ಬೆಳಗಾವಿಯ ಸರ್ವೋ ಕಂಟ್ರೋಲ್ ಲಿ.ನ ಪ್ರದೀಪ ಚಿಕ್ಕಮಠ್, ವಿಟಿಯು ಕೌಶಲ್ಯಾಭಿವೃದ್ಧಿ ಯೋಜನೆಯ ನಿರ್ದೇಶಕಿ ಡಾ.ಸಂಧ್ಯಾ ಅಣ್ವೇಕರ್, ದಾಂಡೇಲಿಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದ ನಿರ್ದೇಶಕ ಪ್ರೊ.ವಿಜೇತ ಸ್ವಾದಿ ಉಪಸ್ಥಿತರಿದ್ದರು. ವಿಟಿಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರ ದಾಂಡೇಲಿಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವ ಪ್ರಥಮ ಮಹಾವಿದ್ಯಾಲಯ ವಿಡಿಐಟಿ ಆಗಿದೆ.



ಹಳಿಯಾಳ ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ವಿ.ಡಿ.ಐ.ಟಿ ಇಂಜಿನಿಯರಿಂಗ್ ಕಾಲೇಜು ದಾಂಡೇಲಿಯಲ್ಲಿರುವ ವಿ.ಟಿ.ಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದೊಂದಿಗೆ ಮಾಜಿ ಸಚಿವ, ಶಾಸಕ ಆರ್.ವಿ.ದೇಶಪಾಂಡೆಯವರ ಉಪಸ್ಥಿತಿಯಲ್ಲಿ ಶೈಕ್ಷಣಿಕ ಒಪ್ಪಂದ ಮಾಡಿಕೊಂಡಿತು.

# ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದೊಂದಿಗೆ ವಿ.ಡಿ.ಐ.ಟಿ ಕಾಲೇಜು ಒಪ್ಪಂದ

**ಹಳಿಯಾಳ:** ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ವಿ.ಡಿ.ಐ.ಟಿ ಇಂಜಿನಿಯರಿಂಗ್ ಕಾಲೇಜು ದಾಂಡೇಲಿಯಲ್ಲಿರುವ ವಿ.ಟಿ.ಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದೊಂದಿಗೆ ಮಾಜಿ ಸಚಿವ, ಹಿರಿಯ ಶಾಸಕ ಆರ್.ವಿ.ದೇಶಪಾಂಡೆಯವರ ಉಪಸ್ಥಿತಿಯಲ್ಲಿ ಸೋಮವಾರ ನಡೆದ ವಿಶೇಷ ಸಭೆಯಲ್ಲಿ ಶೈಕ್ಷಣಿಕ ಒಪ್ಪಂದ ಮಾಡಿಕೊಂಡಿತು.

ಈ ಒಡಂಬಡಿಕೆ ಮುಖಾಂತರ ವಿದ್ಯಾರ್ಥಿಗಳು ಇಂಟರ್ನ್‌ಶಿಪ್ ಮತ್ತು ಕೈಗಾರಿಕಾ ಅನುಭವಗಳನ್ನು ಅತಿ ಕಡಿಮೆ ವೆಚ್ಚದಲ್ಲಿ ಪಡೆದುಕೊಳ್ಳಬಹುದಾಗಿದೆ. ದಾಂಡೇಲಿಯಲ್ಲಿನ ವಿ.ಟಿ.ಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಸಲಹಾ ಸಮಿತಿಯ ಸಭೆಯಲ್ಲಿ ಈ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ಶಾಸಕ ಆರ್.ವಿ.ದೇಶಪಾಂಡೆ ಮಾತನಾಡಿ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಒದಗಿಸಲಾದ ಅತ್ಯಾಧುನಿಕ ಸೌಲಭ್ಯಗಳ ಸದುಪಯೋಗವನ್ನು ಪಡೆಯಬೇಕೆಂದು ಕರೆನೀಡಿದರು. ಬೆಳಗಾವಿಯ ವಿ.ಟಿ.ಯು ಕುಲಪತಿಗಳಾದ ಡಾ.ವಿದ್ಯಾಶಂಕರ್ ಎಸ್ ಮಾತನಾಡಿ ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನದ ಉನ್ನತೀಕರಣಕ್ಕಾಗಿ ಹೆಚ್ಚಿನ ತರಬೇತಿಗಳನ್ನು ಕೌಶಲ್ಯಾಭಿವೃದ್ಧಿ ಕೇಂದ್ರದಲ್ಲಿ ಪ್ರಾರಂಭಿಸಲಾಗುವುದು ಎಂದು ಹೇಳಿದರು.

ವಿ.ಡಿ.ಐ.ಟಿ ಇಂಜಿನಿಯರಿಂಗ್ ಕಾಲೇಜು ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ಮಾತನಾಡಿ ಮಹಾವಿದ್ಯಾಲಯದ ವಿದ್ಯಾರ್ಥಿಗಳನ್ನು ಸಿ.ಎನ್.ಸಿ ಮಶಿನ್ ಆಪರೇಶನ್ಸ್ ಮತ್ತು ಕಂಪ್ಯೂಟರ್ ಹಾರ್ಡ್‌ವೇರ್ ಎಂಡ್ ನೆಟ್ವರ್ಕಿಂಗ್ ವಿಷಯಗಳಲ್ಲಿ ಹೆಚ್ಚಿನ ತರಬೇತಿಗಾಗಿ ಕೌಶಲ್ಯಾಭಿವೃದ್ಧಿ ಕೇಂದ್ರಕ್ಕೆ ಕಳಿಸಲಾಗುವುದು ಎಂದರು.

ಕೌಶಲ್ಯಾಭಿವೃದ್ಧಿ ಕೇಂದ್ರದ ಸಲಹಾ ಸಮಿತಿಯ ಸದಸ್ಯರಾದ ನಾರಾಯಣ ಹೊಸುರ, ಚೈತನ್ಯ ಕುಲಕರ್ಣಿ, ಸೋನಿಯಾ ನೇತಲ್ಕರ್, ವೆಸ್ಟ್‌ಕೋಸ್ಟ್ ಪೇಪರ್ಸ್ ಮಿಲನ್ ಕೆ.ಜೆ.ಗಿರಿರಾಜ್, ಬೆಳಗಾವಿಯ ಸರ್ವೋದಯ ಕಂಟ್ರೋಲ್ ಲಿ. ಪ್ರದೀಪ ಚಿಕ್ಕಮಠ, ವಿ.ಟಿ.ಯು ಕೌಶಲ್ಯಾಭಿವೃದ್ಧಿ ಯೋಜನೆಯ ನಿರ್ದೇಶಕರಾದ ಡಾ.ಸಂಧ್ಯಾ ಅಣ್ವೇಕರ, ದಾಂಡೇಲಿಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದ ನಿರ್ದೇಶಕ ಪ್ರೋ.ವಿಜೇತ್ ಸ್ವಾದಿ ಉಪಸ್ಥಿತರಿದ್ದರು.

# ರಾಷ್ಟ್ರೀಯ ಕೌಶಲಾಭಿವೃದ್ಧಿ ಕೇಂದ್ರದೊಂದಿಗೆ ವಿಡಿಐಟಿ ಒಡಂಬಡಿಕೆ



ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದೊಂದಿಗೆ ವಿಡಿಐಟಿ ಒಡಂಬಡಿಕೆ ನಡೆಯಿತು.

**ಹಳಿಯಾಳ:** ಕೆ.ಎಲ್.ಎಸ್ ವಿ.ಡಿ.ಐ.ಟಿ ಹಳಿಯಾಳವು ವಿ.ಟಿ.ಯು ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರ ದಾಂಡೇಲಿಯ ಜೊತೆ ಅ.16ರಂದು ಒಡಂಬಡಿಕೆ ಮಾಡಿಕೊಂಡಿತು. ಈ ಒಡಂಬಡಿಕೆಯ ಮುಖಾಂತರ ವಿದ್ಯಾರ್ಥಿ ಗಳು ಇಂಟರ್ನ್‌ಶಿಪ್ ಮತ್ತು ಕೈಗಾರಿಕಾ ಅನುಭವಗಳನ್ನು ಅತೀ ಕಡಿಮೆ ವೆಚ್ಚದಲ್ಲಿ ಪಡೆದುಕೊಳ್ಳಬಹುದಾಗಿದೆ. ವಿ.ಟಿ.ಯು ರಾಷ್ಟ್ರೀಯ ಕೌಶಲಾಭಿವೃದ್ಧಿ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ ಸಲಹಾ ಸಮಿತಿ ಸಭೆಯಲ್ಲಿ ಈ ಒಡಂಬಡಿಕೆಗೆ ಸಹಿ ಹಾಕಲಾಯಿತು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಮಾನ್ಯ ಶಾಸಕರಾದ ಆರ್ ವಿ ದೇಶಪಾಂಡೆ ಅವರು ದಾಂಡೇಲಿಯ ರಾಷ್ಟ್ರೀಯ ಕೌಶಲಾಭಿವೃದ್ಧಿ ಕೇಂದ್ರದಲ್ಲಿ ಒದಗಿಸಲಾದ ಅತ್ಯಾಧುನಿಕ ಸೌಲಭ್ಯಗಳನ್ನು ಸದುಪಯೋಗಗೊಳಿಸಿಕೊಳ್ಳಲು ಕರೆ ನೀಡಿದರು. ವಿ.ಟಿ.ಯು ಬೆಳಗಾವಿಯ ಕುಲಪತಿಗಳಾದ ಡಾ. ವಿದ್ಯಾಶಂಕರ್ ಎಸ್ ಅವರು ಮಾತನಾಡಿ ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ ಉನ್ನತೀಕರಣಕ್ಕಾಗಿ ಹೆಚ್ಚಿನ ತರಬೇತಿಗಳನ್ನು ಕೌಶಲಾಭಿವೃದ್ಧಿ ಕೇಂದ್ರದಲ್ಲಿ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು. ಕೆ.ಎಲ್.ಎಸ್ ವಿ.ಡಿ.ಐ.ಟಿ ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ ಅವರು ಮಾತನಾಡುತ್ತ ಮಹಾವಿದ್ಯಾಲಯದ ವಿದ್ಯಾರ್ಥಿಗಳನ್ನು ಸಿ.ಎನ್.ಸಿ ಮಶಿನ್ ಆಪರೇಶನ್ಸ್ ಮತ್ತು ಕಂಪ್ಯೂಟರ್ ಹಾರ್ಡ್‌ವೇರ್ ಎಂಡ್ ನೆಟ್ವರ್ಕಿಂಗ್ ವಿಷಯಗಳಲ್ಲಿ ಹೆಚ್ಚಿನ ತರಬೇತಿಗಾಗಿ ಕೌಶಲಾಭಿವೃದ್ಧಿ ಕೇಂದ್ರಕ್ಕೆ ಕಳಿಸಲಾಗುವುದು ಎಂದು ತಿಳಿಸಿದರು.

ಕೌಶಲಾಭಿವೃದ್ಧಿ ಕೇಂದ್ರದ ಸಲಹಾ ಸಮಿತಿ ಸದಸ್ಯರುಗಳಾದ ನಾರಾಯಣ ಹೊಸೂರ್, ಚೈತನ್ಯ ಕುಲಕರ್ಣಿ, ಕು. ಸೋನಿಯಾ ನೇತಲ್ಕರ್, ವೆಸ್ಟ್ ಕೋಸ್ಟ್ ಪೇಪರ್ ಮಿಲ್‌ನ ಕೆ.ಜೆ ಗಿರಿರಾಜ್, ಬೆಳಗಾವಿಯ ಸರ್ವೋ ಕಂಟ್ರೋಲ್ ಲಿ. ನ ಪ್ರದೀಪ ಚಿಕ್ಕಮಠ್, ವಿ.ಟಿ.ಯು ಕೌಶಲಾಭಿವೃದ್ಧಿ ಯೋಜನೆಯ ನಿರ್ದೇಶಕರಾದ ಡಾ. ಸಂಧ್ಯಾ ಅಣ್ವೇಕರ್, ದಾಂಡೇಲಿಯ ರಾಷ್ಟ್ರೀಯ ಕೌಶಲ್ಯಾಭಿವೃದ್ಧಿ ಕೇಂದ್ರದ ನಿರ್ದೇಶಕರಾದ ಪ್ರೊ. ವಿಜೇತ ಸ್ವಾದಿ ಉಪಸ್ಥಿತರಿದ್ದರು.

ವಿ.ಟಿ.ಯು ರಾಷ್ಟ್ರೀಯ ಕೌಶಲಾಭಿವೃದ್ಧಿ ಕೇಂದ್ರ, ದಾಂಡೇಲಿ ಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವ ಪ್ರಥಮ ಮಹಾವಿದ್ಯಾಲಯ ವಿ. ಡಿ. ಐ. ಟಿ ಆಗಿದೆ.

## ಪಾಲಕರ ಸಭೆ ಯಶಸ್ವಿ

**ಹಳಿಯಾಳ:** ಕೆಎಲ್‌ಎಸ್‌ವಿಡಿಐಟಿ ಹಳಿಯಾಳದಲ್ಲಿ ಪಾಲಕರ ಸಭೆಯನ್ನು ಅಕ್ಟೋಬರ್ 15ರಂದು ಹಮ್ಮಿಕೊಳ್ಳಲಾಗಿತ್ತು.

ಇಂಜಿನಿಯರಿಂಗ್ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಪಾಲಕರನ್ನು ಸ್ವಾಗತಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಮಹಾವಿದ್ಯಾಲಯವು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಒದಗಿಸುತ್ತಿರುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಕ್ರೀಡಾ ವಿಭಾಗದಲ್ಲಿ ವಿದ್ಯಾರ್ಥಿಗಳಿಗೆ ಪೂರಕವಾಗುವ ವಾತಾವರಣವನ್ನು ಮಹಾವಿದ್ಯಾಲಯವು ನಿರ್ಮಿಸಿದೆ ಎಂದು ಹೇಳಿದರು. ವಿದ್ಯಾರ್ಥಿ ಗಳ ಕೌಶಲ್ಯ ಅಭಿವೃದ್ಧಿಗೆ ಪಠ್ಯಕ್ರಮದ ಹೊರತಾಗಿ ಆಡ್ ಆನ್ ಕೋರ್ಸ್ ಗಳ ಮೂಲಕ ಕೈಗಾರಿಕಾ ಕ್ಷೇತ್ರವು ಬಯಸುತ್ತಿರುವ ಕೌಶಲ್ಯವನ್ನು ನೀಡಲಾಗುತ್ತಿದೆ ಎಂದು ಹೇಳಿದರು. ಮಹಾವಿದ್ಯಾಲಯವು ವಿದ್ಯಾರ್ಥಿಗಳಿಗೆ ಒದಗಿಸುವ ಸೌಲಭ್ಯಗಳ ಮೌಲ್ಯಮಾಪನ ನಡೆಸಿ ನ್ಯಾಕ್ ತಂಡವು 'ಎ' ಶ್ರೇಣಿ ನೀಡಿದೆ ಎಂದು ಇದೇ ಸಂಧರ್ಭ ದಲ್ಲಿ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಆಡಳಿತ ಮಂಡಳಿ ಅಧ್ಯಕ್ಷ ಶ್ರೀ ವಿನಾಯಕ್ ಲೋಕುರ್, ತಂತ್ರಜ್ಞಾನದ ಜೊತೆಗೆ ರಾಷ್ಟ್ರೀಯತೆ ಮತ್ತು ಸಮಾಜಮುಖಿ ಧೋರಣೆ ಬೆಳೆಸಿಕೊಳ್ಳಬೇಕೆಂದು ಹೇಳಿದರು. ವಿದ್ಯಾರ್ಥಿ ಗಳಿಗೆ ಜೀವನದ ಗುರಿ ಸ್ಪಷ್ಟ ವಾಗಿರಬೇಕು ಮತ್ತು ಈ ನಿಟ್ಟಿನಲ್ಲಿ ಪಾಲಕರ ಮತ್ತು ಮಕ್ಕಳೊಂದಿಗೆ ಸಂವಾದ ತುಂಬಾ ಮುಖ್ಯವಾಗಿದೆ ಎಂದರು. ವಿ ಡಿ ಐ ಟಿ ಕೈಗಾರಿಕಾ ಬಾಂಧವ್ಯಕ್ಕೆ ಒತ್ತು ನೀಡಿದ್ದು, ಹಲವು ಒಪ್ಪಂದ ಮಾಡಿಕೊಂಡಿದೆ. ವಿದ್ಯಾರ್ಥಿಗಳು ಮಹಾ ವಿದ್ಯಾಲಯದ ಸೌಲಭ್ಯ ಉಪಯೋಗಿಸಿಕೊಳ್ಳಲು ಕರೆ ನೀಡಿದರು.

ಸಿಇಟಿಯಲ್ಲಿ ಉತ್ತಮ ಅಂಕ ಪಡೆದು ಮಹಾವಿದ್ಯಾಲಯದಲ್ಲಿ ಪ್ರವೇಶ ಪಡೆದುಕೊಂಡಿರುವ ವಿದ್ಯಾರ್ಥಿಗಳಿಗೆ ಪಾಲಕರ ಸಮ್ಮುಖದಲ್ಲಿ ಪುರಸ್ಕರಿಸಲಾಯಿತು. ರಸಾಯನ ಶಾಸ್ತ್ರ ವಿಭಾಗದ ಡಾ. ರವೀಂದ್ರ ಮುಸ್ಗೋಳ್ಳಿ, ಡಾ ವಿನೋದ್ ನಾಯ್ಕ ಕಾರ್ಯಕ್ರಮ ಸಂಯೋಜಿಸಿದ್ದರು. ಪ್ರೊ. ರೋಹಿಣಿ ಕಲ್ಲೂರ್ ಮತ್ತು ಪ್ರೊ. ಲಕ್ಷ್ಮಿ ಹಟ್ಟಿ ಹೋಳಿ ನಿರೂಪಿಸಿದರು. ಪ್ರೊ ಸ್ನೇಹಾ ಕುಲಕರ್ಣಿ ಸ್ವಾಗತಿಸಿದರು, ಪ್ರೊ. ಎಸ್.ಡಿ. ಕುಲಕರ್ಣಿ ವಂದಿಸಿದರು. ವಿವಿಧ ಡೀನ್‌ಗಳು, ಮುಖ್ಯಸ್ಥರು , ಅಧಿಕ ಪಾಲಕರು ಸಭೆಯಲ್ಲಿ ಇದ್ದರು.



ಕೆಎಲ್ ಎಸ್ ವಿಡಿಐಟಿ ಹಳಿಯಾಳದಲ್ಲಿ ಪಾಲಕರ ಸಭೆಯನ್ನು ಯಶಸ್ವಿಯಾಗಿ ನಡೆಸಲಾಯಿತು.